**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE/ADMI0/EST(10) 2022

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001
ದಿನಾಂಕ: 02-12-.2022

# ಸುತ್ತೋಲೆ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯಡಿಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಭೋದಕವರ್ಗ ದವರುಗಳಿಗೆ ವೃತ್ತಿ ಪದೋನ್ನತಿ ನೀಡುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಸೇವೆಗೆ ಸೇರಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕ ವರ್ಗದವರುಗಳು 6ನೇ ಎಐಸಿಟಿಇ ವೇತನ ಶ್ರೇಣಿ ಅಧಿಸೂಚನೆ 2010, ಮತ್ತು ಎಐಸಿಟಿಇ ಸಿ.ಎ.ಎಸ್ ಅಧಿಸೂಚನೆ 2012 ಹಾಗೂ ಎಐಸಿಟಿಇ ರವರು ಕಾಲಕಾಲಕ್ಕೆ ಹೊರಡಿಸಿರುವ ಸ್ಪಷ್ಟೀಕರಣಗಳ/ ಆದೇಶಗಳನ್ವಯ ದಿನಾಂಕ :01.03.2019 ರೊಳಗೆ 6ನೇ ಎಐಸಿಟಿಇ ವೇತನ ಶ್ರೇಣಿಯಲ್ಲಿ ಹಾಲಿ ಎಜಿಪಿ-9000 ಪಡೆಯುತ್ತಿದ್ದು, ಎಐಸಿಟಿಇ ನಿಗಧಿಪಡಿಸಿರುವ ಎಲ್ಲಾ ಮಾನದಂಡಗಳನ್ನು ಪೂರೈಸಿರುವ/ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಅಧ್ಯಾಪಕರುಗಳು/ ಉಪನ್ಯಾಸಕರುಗಳು ಎಜಿಪಿ 9000 ರಿಂದ ಎಜಿಪಿ10000ಕ್ಕೆ ವೃತ್ತಿ ಪದೋನ್ನತಿಕರಿಸಲು ಅರ್ಹ ಅಧ್ಯಾಪಕರುಗಳು / ಉಪನ್ಯಾಸಕರುಗಳು ಅಗತ್ಯ ದಾಖಲೆಗಳನ್ನು ಪ್ರಾಂಶುಪಾಲರುಗಳಿಂದ ದೃಢೀಕ್ರರಿಸಿ ದಿನಾಂಕ; 10.12.2022 ರೊಳಗೆ ಸಂಸ್ಥೆಯ IQAC ಸಮಿತಿಗೆ ಸಲ್ಲಿಸತಕ್ಕದ್ದು.

ಮುಂದುವರೆದು, ಸಂಸ್ಥೆಯ IQAC ಸಮಿತಿಯು ಎಲ್ಲಾ ದಾಖಲಾತಿಗಳನ್ನು ಕ್ರೋಢಿಕರಿಸಿ, ಕೂಲಂಕುಷವಾಗಿ ಪರಿಶೀಲಿಸಿ, ಅರ್ಹ ಬೋಧಕ ವರ್ಗದವರ ಪ್ರಸ್ತಾವನೆಯನ್ನು ದಿನಾಂಕ: 15.12.2022 ರೊಳಗೆ ಆಯುಕ್ತಾಲಯಕ್ಕೆ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

**ನಿರ್ದೇಶಕರು**
ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ,**

ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮಾಹಿತಿಗಾಗಿ

**ಪ್ರತಿ,**

1. ಆಯುಕ್ತರ ಆಪ್ತ ಶಾಖೆಗೆ ಮಾಹಿತಿಗಾಗಿ.
2. ನಿರ್ದೇಶಕರ ಆಪ್ತ ಶಾಖೆಗೆ ಮಾಹಿತಿಗಾಗಿ.
3. ಜಂಟಿ ನಿರ್ದೇಶಕರು(ಆಡಳಿತ) ಆಪ್ತ ಶಾಖೆಗೆ ಮಾಹಿತಿಗಾಗಿ.
4. ಜಂಟಿ ನಿರ್ದೇಶಕರು(ಸಿಡಿಸಿ) ಆಪ್ತ ಶಾಖೆಗೆ ಮಾಹಿತಿಗಾಗಿ.
5. ಇ-ಆಡಳಿತ ವಿಭಾಗಕ್ಕೆ- ಅಂತರ್ ಜಾಲದಲ್ಲಿ ಪ್ರಕಟಿಸಲು.